ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

82

ಸಂಖ್ಯೆ:ಬೃ.ಬೆಂ.ಮ.ಪಾ/ಅ.ಆ/ಯ.ವ/ಆ.ಅ/AS/1058/2014-15.

ಅಪರ ಆಯುಕ್ತರವರ ಕಛೇರಿ
ಯಲಹಂಕ ವಲಯ, ಬೃ.ಬೆಂ.ಮ.ಪಾ.
ಬೆಂಗಳೂರು -92 ದಿನಾಂಕ:16-12-2014

ಆಡಳಿತಾತ್ಮಕ ಅನುಮೋದನೆ

ವಿಷಯ:- **Extension of Reva College Road to 25 Mts to Hosahalli (to link International Airport)** – upto CISF Compound (BBMP limits)

ಉಲ್ಲೇಖ:- ಮುಖ್ಯ ಲೆಕ್ಕಾಧಿಕಾರಿರವರ ಕಛೇರಿ ಕಾಮಗಾರಿ ಸಂಕೇತ: 005-13-000089

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಯೋಜನೆ ವಿಭಾಗ) ರವರು 2014-15ನೇ ಸಾಲಿನ ದರಪಟ್ಟಿಯಂತೆ **"ಪಿ-2908"** ಅನುದಾನದಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ.100.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ: ಪಿ.ಆರ್(G)/3032/2013-14 ದಿನಾಂಕ:19-07-2013ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಈ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ 02 ಕ್ರ.ಸಂ 1058 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:-

1) ಅಂದಾಜು ಪಟ್ಟಿಯ ಮೊತ್ತ ರೂ.100.00 ಲಕ್ಷಗಳಿಗೆ ಮೀರದಂತೆ ಕಾಮಗಾರಿಯನ್ನು ಕೈಗೊಳ್ಳಲಾಗುವುದು.
2) ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮ ಬದ್ಧಗೊಳಿಸುವುದು.
3) ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4) ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.

ಅಪರ ಆಯುಕ್ತರು,
ಯಲಹಂಕ ವಲಯ,
ಬಿ.ಬಿ.ಎಂ.ಪಿ ಬೆಂಗಳೂರು-92.

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು, ಯಲಹಂಕ ವಲಯ, ಯೋಜನಾ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ವಲಯ, ಯೋಜನೆ ಉಪ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ನಿಯಂತ್ರಕರು(ಹಣಕಾಸು) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೆಕ್ಕಾಧಿಕಾರಿಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ